ಕರ್ನಾಟಕ ಸರ್ಕಾರ

**ಕರ್ನಾಟಕ ಸರ್ಕಾರದ ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು**

ಸಂಖ್ಯೆ:ಸಿ5(9)ಸ.ಸೇ.ಪ್ರ/27/2019–20 ದಿನಾಂಕ: 27–11–2019

**ಸುತ್ತೋಲೆ**

ವಿಷಯ: ಸಾರ್ವಜನಿಕ ಶಿಕ್ಷಣ ಇಲಾಖೆಯ ನೌಕರರ ಹೆಸರನ್ನು ಸರ್ವೋತ್ತಮ ಸೇವಾ ಪ್ರಶಸ್ತಿಗೆ ಶಿಫಾರಸ್ಸು ಮಾಡುವ ಬಗ್ಗೆ.

ಉಲ್ಲೇಖ: ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 105 ಇಆಸು 2011 ದಿನಾಂಕ: 20/11/2012 ತಿದ್ದಪಡಿ ದಿನಾಂಕ: 15/04/2013

2. ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ69ಎಎಆರ್2019 ದಿನಾಂಕ: 30/10/2019

*****

ರಾಜ್ಯ ಸರ್ಕಾರವು ಅತ್ಯುತ್ತಮ ಸೇವೆ ಸಲ್ಲಿಸಿದ/ಸಾಧನೆ ಮಾಡಿರುವ ರಾಜ್ಯ ಸರ್ಕಾರಿ ನೌಕರರಿಗೆ **"ಸರ್ವೋತ್ತಮ ಸೇವಾ ಪ್ರಶಸ್ತಿ"** ಅನ್ನು ನೀಡುವ ಯೋಜನೆಯನ್ನು ಹಮ್ಮಿಕೊಂಡಿದ್ದು, ಈ ಯೋಜನೆಯಡಿ ಜಿಲ್ಲಾವಾರು ಪ್ರಶಸ್ತಿ, ಇಲಾಖಾವಾರು ಪ್ರಶಸ್ತಿ ಹಾಗೂ ರಾಜ್ಯ ಪ್ರಶಸ್ತಿ ನೀಡುವುದನ್ನು ಉಲ್ಲೇಖದ ಆದೇಶ/ಸುತ್ತೋಲೆಗಳನ್ವಯ ಜಾರಿಗೆ ತಂದಿರುವುದು ಸರಿಯಷ್ಟೆ(ಆದೇಶ/ಸುತ್ತೋಲೆ ಪ್ರತಿ ಲಗತ್ತಿಸಿದೆ).

2019–20ನೇ ಸಾಲಿನಿಂದ ರಾಜ್ಯ ಮತ್ತು ಇಲಾಖಾವಾರು ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನವನ್ನು online ನಲ್ಲಿ ಸಲ್ಲಿಸಲು ಜಾಲತಾಣವನ್ನು ಅಭಿವೃದ್ಧಿಪಡಿಸಲಾಗಿದೆ ಹಾಗೂ ಇದರ ವಿಳಾಸ www.https://sarvothamaawards.karnataka.gov.in ಆಗಿರುತ್ತದೆ. ಈ ಸಾಲಿನ ಇಲಾಖಾ ಹಾಗೂ ರಾಜ್ಯ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ನಾಮ ನಿರ್ದೇಶನವನ್ನು ಜಾಲತಾಣದ ಮುಖಾಂತರವೇ ಅಧಿಕಾರಿ/ನೌಕರರು ಸಲ್ಲಿಸಬೇಕೆಂದು ಉಲ್ಲೇಖ(2)ರ ಸುತ್ತೋಲೆಯಲ್ಲಿ ತಿಳಿಸಿದ್ದು, ಸಲ್ಲಿಸುವ ವಿಧಾನವನ್ನು ನೀಡಲಾಗಿದೆ. ಜಿಲ್ಲಾ ಮಟ್ಟದಲ್ಲಿ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನವನ್ನು ಚಾಲ್ತಿಯಲ್ಲಿರುವಂತೆ ಪ್ರಸ್ತಾವನೆಯನ್ನು ಸಕ್ಷಮ ಪ್ರಾಧಿಕಾರಕ್ಕೆ ಅರ್ಜಿ ಮುಖೇನ ಮಾತ್ರ ಸಲ್ಲಿಸುವಂತೆ ತಿಳಿಸಲಾಗಿದೆ.

ಈ ಹಿನ್ನೆಲೆಯಲ್ಲಿ ಸಾರ್ವಜನಿಕ ಶಿಕ್ಷಣ ಇಲಾಖೆಯ ಬೋಧಕೇತರ ನೌಕರರು ರಾಜ್ಯಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಸರ್ಕಾರದ ಮಾರ್ಗಸೂಚಿಗಳಂತೆ ಅರ್ಹ ಅಧಿಕಾರಿ/ನೌಕರರ ನಾಮನಿರ್ದೇಶನಗಳನ್ನು online ಮೂಲಕ ಸಲ್ಲಿಸುವುದು. ಜಿಲ್ಲಾ ಮಟ್ಟದಲ್ಲಿ ಸರ್ವೋತ್ತಮ ಸೇವಾ ಪ್ರಶಸ್ತಿಗೆ ನಾಮ ನಿರ್ದೇಶನವನ್ನು ಪ್ರಸ್ತಾವನೆಯನ್ನು ಸಕ್ಷಮ ಪ್ರಾಧಿಕಾರಕ್ಕೆ ಚಾಲ್ತಿಯಲ್ಲಿರುವಂತೆ ಅರ್ಜಿ ಮುಖೇನ ದಿನಾಂಕ: 30/11/2019 ರೊಳಗೆ ಸಲ್ಲಿಸುವಂತೆ ತಿಳಿಸಿದೆ.

[ಅರುಳ್ ಕುಮಾರ್]
ಜಂಟಿ ನಿರ್ದೇಶಕರು(ಆಡಳಿತ)

ಇವರಿಗೆ,

1. ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ಮತ್ತು ಕಲಬುರ್ಗಿ ರವರಿಗೆ ರವಾನಿಸುತ್ತಾ ತಮ್ಮ ಆಡಳಿತ ವ್ಯಾಪ್ತಿಗೆ ಸಂಬಂಧಿಸಿದ ಎಲ್ಲಾ ಕಛೇರಿಗಳಿಗೆ ಈ ಸುತ್ತೋಲೆಯನ್ನು ಕಳುಹಿಸಲು ಕೋರಿದೆ.
2. ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಅಭಿಯಾನ, ಬೆಂಗಳೂರು.
3. ನಿರ್ದೇಶಕರು(ಪರೀಕ್ಷೆಗಳು), ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಬೆಂಗಳೂರು.

4. ನಿರ್ದೇಶಕರು, ಉರ್ದು ಮತ್ತು ಇತರೆ ಅಲ್ಪ ಸಂಖ್ಯಾತ ಭಾಷಾ ನಿರ್ದೇಶನಾಲಯ, (ಆಯುಕ್ತರ ಕಛೇರಿ ಕಟ್ಟಡ, ಸಾ.ಶಿ.ಇಲಾಖೆ) ನೃಪತುಂಗ ರಸ್ತೆ, ಬೆಂಗಳೂರು.
5. ನಿರ್ದೇಶಕರು, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು, ಕರ್ನಾಟಕ ರಾಜ್ಯ ಪಠ್ಯಪುಸ್ತಕ ಸಂಘ, ರಾಜ್ಯ ಶಿಕ್ಷಣ ಸಂಶೋಧನೆ ಮತ್ತು ತರಬೇತಿ ನಿರ್ದೇಶನಾಲಯ ಆವರಣ, ಬನಶಂಕರಿ, 3ನೇ ಹಂತ, ಬೆಂಗಳೂರು.
7. ಸಹ ನಿರ್ದೇಶಕರು, ಮಧ್ಯಾಹ್ನ ಉಪಹಾರ ಯೋಜನೆ , ಕೆ.ಜಿ ರಸ್ತೆ, ಬೆಂಗಳೂರು.
8. ವಿಭಾಗೀಯ ಕಾರ್ಯದರ್ಶಿಗಳು ಹಾಗೂ ಪದನಿಮಿತ್ತ ಸಹ ನಿರ್ದೇಶಕರು, ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿ, ಮೈಸೂರು.
9. ಸಹನಿರ್ದೇಶಕರು, ಶಿಕ್ಷಕರ ಕಲ್ಯಾಣ ನಿಧಿ, ಶಿಕ್ಷಕರ ಸದನ, ಕೆ.ಜಿ.ರಸ್ತೆ, ಬೆಂಗಳೂರು.
10. ಪ್ರಾಂಶುಪಾಲರು, ಸರ್ಕಾರಿ ಶಿಕ್ಷಕರ ಶಿಕ್ಷಣ ಮಹಾವಿದ್ಯಾಲಯ, ಚಿತ್ರದುರ್ಗ, ಮೈಸೂರು ಮತ್ತು ಮಂಗಳೂರು.
11. ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಎಲ್ಲಾ ಉಪನಿದೇಶಕರು(ಆಡಳಿತ).
12. ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಎಲ್ಲಾ ಉಪನಿದೇಶಕರು(ಅಭಿವೃದ್ಧಿ).
13. ಸಾರ್ವಜನಿಕ ಶಿಕ್ಷಣ ಇಲಾಖೆ ಬೆಂಗಳೂರು ಆಯುಕ್ತಾಲಯ ವ್ಯಾಪ್ತಿಯ ಎಲ್ಲಾ ಕ್ಷೇತ್ರಶಿಕ್ಷಣಾಧಿಕಾರಿಗಳಿಗೆ, ಸರ್ಕಾರಿ ಪ್ರೌಢಶಾಲಾ ಮುಖ್ಯಸ್ಥರಿಗೆ (ಸಂಬಂಧಿಸಿದ ಉಪನಿರ್ದೇಶಕರು(ಆಡಳಿತ) ರವರ ಮೂಲಕ).
14. ಹಿರಿಯ ಸಹಾಯಕ ನಿರ್ದೇಶಕರು, ಇ-ಆಡಳಿತ ಶಾಖೆ ರವರಿಗೆ ನೀಡುತ್ತಾ ಸದರಿ ಸುತ್ತೋಲೆಯನ್ನು ಇಲಾಖಾ ವೆಬ್ ಸೈಟ್‌ನಲ್ಲಿ ಪ್ರಕಟಿಸಲು ತಿಳಿಸಿದೆ.
15. ಕಛೇರಿ ಪ್ರತಿ.

**ಪ್ರತಿಯನ್ನು:**

1. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ, ಬೆಂಗಳೂರು ರವರಿಗೆ ಮಾಹಿತಿಗಾಗಿ ಸಲ್ಲಿಸಿದೆ.

ಈ ಸುತ್ತೋಲೆಯನ್ನು ಇಲಾಖಾ ವೆಬ್ ಸೈಟ್ www.schooleducation.kar.nic.in ನಲ್ಲಿ ಪ್ರಕಟಿಸಲಾಗಿದೆ.